# Akashvani : Bangalore
# Regional Bulletin In Kannada
# 13.03.2026 / 18.40 hrs

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**13.03.2026 / 18.40 hrs**

**<><*<><>*><>**

ಮುಖ್ಯಾಂಶಗಳು

೧. ದೇಶದ ೯ ಕೋಟಿಗೂ ಅಧಿಕ ರೈತರ ಬ್ಯಾಂಕ್ ಖಾತೆಗೆ ಕಿಸಾನ್ ಸಮ್ಮಾನ್ ನಿಧಿಯ ೨೨ನೇ ಕಂತಿನ ಹಣ ಬಿಡುಗಡೆ ಮಾಡಿದ ಪ್ರಧಾನಿ

೨. ರಾಜ್ಯದ ತಂಬಾಕು ಬೆಳೆಗಾರರ ನೆರವಿಗೆ ಧಾವಿಸಿದ ಕೇಂದ್ರ ಸರ್ಕಾರ ; ಸೋಮವಾರದಿಂದ ಖರೀದಿ ಪ್ರಕ್ರಿಯೆ ಆರಂಭ

೩. ಬಳ್ಳಾರಿಯಲ್ಲಿ ನೂತನ ವಿಮಾನ ನಿಲ್ದಾಣ ನಿರ್ಮಾಣ ಕುರಿತಂತೆ ಪರಿಶೀಲನೆ ವಿಧಾನಸಭೆಗೆ ಸಚಿವ ಎಂ.ಬಿ.ಪಾಟೀಲ್ ಸ್ಪಷ್ಟನೆ

೪. ರಾಜ್ಯಾದ್ಯಂತ ಅಡುಗೆ ಅನಿಲ ಅಭಾವ ; ಕಾಡಂಚಿನಲ್ಲಿ ಮರ ಕಡಿಯದಂತೆ ಕಟ್ಟೆಚ್ಚರ ವಹಿಸಲು ಅರಣ್ಯಾಧಿಕಾರಿಗಳಿಗೆ ಸರ್ಕಾರ ಸೂಚನೆ

೫. ಬಿಜೆಪಿ ಕೇಂದ್ರೀಯ ಸಮಿತಿ ಸಭೆಯಲ್ಲಿ ವಿಧಾನಸಭಾ ಉಪಚುನಾವಣೆ ಅಭ್ಯರ್ಥಿ ಆಯ್ಕೆ ಕುರಿತಂತೆ ಚರ್ಚೆ

**<><*<><>*><>**

ಪ್ರಧಾನಿ ನರೇಂದ್ರ ಮೋದಿ ಅವರು, ಅಸ್ಸಾಂನ ಗುವಾಹಟಿಯಲ್ಲಿ ಇಂದು ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ನಿಧಿಯ ೨೨ನೇ ಕಂತಿನ ಹಣವನ್ನು ಬಿಡುಗಡೆ ಮಾಡಿದರು. ಒಟ್ಟು ೧೮ ಸಾವಿರದ ೬೪೦ ಕೋಟಿ ರೂಪಾಯಿಗಳನ್ನು ಬಿಡುಗಡೆ ಮಾಡಿದ್ದು, ೨ ಸಾವಿರ ರೂಪಾಯಿಯಂತೆ ಸುಮಾರು ೯ ಕೋಟಿ ೩೨ ಲಕ್ಷ ರೈತರ ಬ್ಯಾಂಕ್ ಖಾತೆಗಳಿಗೆ ನೇರ ವರ್ಗಾವಣೆ ಮೂಲಕ ಹಣ ಜಮೆಯಾಗಿದೆ. ಈ ಯೋಜನೆಯಡಿ ಇದುವರೆಗೆ ರೈತರಿಗೆ ೪ ಲಕ್ಷ ೯ ಸಾವಿರ ಕೋಟಿ ರೂಪಾಯಿಗಳಿಗೂ ಹೆಚ್ಚಿನ ಹಣವನ್ನು ವರ್ಗಾಯಿಸಲಾಗಿದೆ. ಸರ್ಕಾರ ವರ್ಷಕ್ಕೆ ರೈತರಿಗೆ ಮೂರು ಕಂತುಗಳಲ್ಲಿ ೬ ಸಾವಿರ ರೂಪಾಯಿ ನೀಡುತ್ತಿದ್ದು, ಇಲ್ಲಿಯವರೆಗೆ ೨೨ ಕಂತುಗಳನ್ನು ನೀಡಲಾಗಿದೆ.

**<><*<><>*><>**

ದೇಶಾದ್ಯಂತ ತಂಬಾಕು ಬೆಳೆಗಾರರ ನೆರವಿಗೆ ಕೇಂದ್ರ ಸರ್ಕಾರ ಧಾವಿಸಿದೆ. ಈ ಹಿನ್ನೆಲೆಯಲ್ಲಿ ನವದೆಹಲಿಯಲ್ಲಿ ಇಂದು ಮಾಜಿ ಪ್ರಧಾನಿ ದೇವೇಗೌಡ, ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ, ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಖಾತೆ ಸಚಿವ ಪಿಯೂಶ್ ಗೋಯಲ್ ಜೊತೆ ಮಾತುಕತೆ ನಡೆಸಿದರು. ಈ ವೇಳೆ ಕೇಂದ್ರ ಸಚಿವರಿಗೆ ತಂಬಾಕು ಬೆಳೆಗಾರರ ಸಮಸ್ಯೆಗಳನ್ನು ಮನವರಿಕೆ ಮಾಡಿಕೊಡಲಾಯಿತು. ಸೋಮವಾರದಿಂದಲೇ ತಂಬಾಕು ಖರೀದಿ ವಿದೇಶಿ ಮಾರುಕಟ್ಟೆಗಳಿಗೆ ರಫ್ತು ಹೊಸ ವಿದೇಶಿ ಮಾರುಕಟ್ಟೆಗಳ ಅನ್ವೇಷಣೆ ಸೇರಿದಂತೆ ಬೆಳೆಗಾರರ ಬೇಡಿಕೆಗಳಿಗೆ ಸಚಿವರು ಸಕಾರಾತ್ಮಕವಾಗಿ ಸ್ಪಂದಿಸಿದ್ದಾರೆ ಎಂದು ಎಚ್.ಡಿ.ಕುಮಾರಸ್ವಾಮಿ ತಿಳಿಸಿದರು. ಈ ಸಂದರ್ಭದಲ್ಲಿ ಸಂಸದ ಯದುವೀರ್ ಒಡೆಯರ್, ಮಾಜಿ ಸಚಿವ ಸಾ.ರಾ.ಮಹೇಶ್, ಶಾಸಕರಾದ ಎ.ಮಂಜು,

ಜಿ.ಡಿ.ಹರೀಶ್‌ಗೌಡ, ಕೋಲಾರ ಸಂಸದ ಮಲ್ಲೇಶ್‌ಬಾಬು ಸೇರಿದಂತೆ ವಾಣಿಜ್ಯ ಸಚಿವಾಲಯದ ಉನ್ನತ ಅಧಿಕಾರಿಗಳು ಭಾಗಿಯಾಗಿದ್ದರು.

**<><*<><>*><>**

ರಾಜ್ಯದಲ್ಲಿ ವಿಮಾನ ನಿಲ್ದಾಣ ನಿರ್ಮಾಣದಲ್ಲಿ ಈ ಹಿಂದೆ ಆದ ತಪ್ಪುಗಳು ಪುನರಾವರ್ತನೆಯಾಗುವುದನ್ನು ತಡೆಯಲು ಹೊಸ ವಿಮಾನಯಾನ ನೀತಿ ತರಲು ಸರ್ಕಾರ ಚಿಂತನೆ ನಡೆಸಿದೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್ ತಿಳಿಸಿದ್ದಾರೆ. ವಿಧಾನಸಭೆಯಲ್ಲಿ ಸದಸ್ಯ ಜನಾರ್ಧನ ರೆಡ್ಡಿ ಪ್ರಶ್ನೆಗೆ ಉತ್ತರಿಸಿದ ಸಚಿವರು, ಬಳ್ಳಾರಿ ವಿಮಾನ ನಿಲ್ದಾಣದ ವಿಸ್ತೃತ ಯೋಜನಾ ವರದಿಯ ಪೂರ್ಣಗೊಂಡ ನಂತರ ವಿಮಾನ ನಿಲ್ದಾಣ ನಿರ್ಮಾಣ ಕುರಿತು ಪರಿಶೀಲಿಸಲಾಗುವುದು ಎಂದು ಭರವಸೆ ನೀಡಿದ್ದಾರೆ. ಬಳ್ಳಾರಿಯಿಂದ ಸುಮಾರು ೧೯ ಕಿಲೋಮೀಟರ್ ದೂರದಲ್ಲಿರುವ ಸ್ಥಳವನ್ನು ಗುರುತಿಸಲಾಗಿದೆ. ಬಳ್ಳಾರಿ, ವಿಜಯನಗರ, ಕೊಪ್ಪಳ ಜಿಲ್ಲೆಗಳ ಜನಪ್ರತಿನಿಧಿಗಳೊಂದಿಗೆ ಚರ್ಚಿಸಿದ ಬಳಿಕ ಮುಂದಿನ ಕ್ರಮ ತೆಗೆದುಕೊಳ್ಳಲಾಗುವುದು. ಸ್ಥಳದ ಸೂಕ್ತತೆಯನ್ನು ಭಾರತೀಯ ವಿಮಾನ ನಿಲ್ದಾಣ ಪ್ರಾಧಿಕಾರ ನಿರ್ಧರಿಸಲಿದೆ ಎಂದು ಅವರು ವಿಧಾನಸಭೆಗೆ ಮಾಹಿತಿ ನೀಡಿದ್ದಾರೆ.

**<><*<><>*><>**

ಜಿಲ್ಲಾ ಮರಳು ಸಮಿತಿಯಿಂದ ಅಧಿಸೂಚನೆ ಹೊರಡಿಸಿ ಕಾರ್ಯಾದೇಶ ನೀಡಿರುವ ಮರಳುವ ನಿಕ್ಷೇಪ ಪ್ರದೇಶಗಳಲ್ಲಿ ಮರಳನ್ನು ತಗೆದು ಸ್ಥಳೀಯ ಕಾಮಗಾರಿಗಳಿಗೆ ಗ್ರಾಮ ಪಂಚಾಯತಿಗಳ ಮೂಲಕ ನೀಡಲು ಅವಕಾಶ ಕಲ್ಪಿಸಲಾಗಿದೆ ಎಂದು ಗಣಿ ಭೂ ವಿಜ್ಞಾನ ಸಚಿವ ಎಸ್.ಎಸ್.ಮಲ್ಲಿಕಾರ್ಜುನ್ ವಿಧಾನಸಭೆಗೆ ತಿಳಿಸಿದ್ದಾರೆ. ಸದಸ್ಯ ಹರೀಶ್ ಪೂಂಜ ಅವರ ಪ್ರಶ್ನೆಗೆ ಉತ್ತರಿಸಿದ ಅವರು, ದಕ್ಷಿಣ ಕನ್ನಡ ಜಿಲ್ಲಾ ವ್ಯಾಪ್ತಿಯಲ್ಲಿ ಹೊಸದಾಗಿ ಏಳು ಮರಳು ನಿಕ್ಷೇಪಗಳನ್ನು ಗುರುತಿಸಿ ಅಧಿಸೂಚನೆ ಹೊರಡಿಸಲಾಗಿದೆ. ಈ ಪೈಕಿ ಒಂದು ಮರಳು ನಿಕ್ಷೇಪ ಪ್ರದೇಶಕ್ಕೆ ಮರಳು ತಗೆಯಲು ಸಂಬಂಧಪಟ್ಟ ಗ್ರಾಮ ಪಂಚಾಯತಿಗಳಿಗೆ ಕಾರ್ಯಾದೇಶ ನೀಡಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ. ಉಡುಪಿ ಜಿಲ್ಲೆಯಲ್ಲಿ ೨೦೨೦-೨೧ ನೇ ಸಾಲಿನಿಂದ ೩೮ ಮರಳು ನಿಕ್ಷೇಪಗಳಲ್ಲಿ ಒಟ್ಟು ೮೦ ಸಾವಿರದ ೩೮೯ ಮೆಟ್ರಿಕ್ ಟನ್ ಮರಳಿನ ಪ್ರಮಾಣ ಲಭ್ಯವಿದ್ದು ಇದುವರೆಗೂ ೨೧ ಸಾವಿರದ ೯೯೦ ಮೆಟ್ರಿಕ್ ಟನ್ ಮರಳನ್ನು ತಗೆದು ಪೂರೈಸಲಾಗಿದೆ ಎಂದು ಸದನಕ್ಕೆ ಮಾಹಿತಿ ನೀಡಿದ್ದಾರೆ.

**<><*<><>*><>**

ಮಧ್ಯಪ್ರಾಚ್ಯದಲ್ಲಿನ ಸಂಘರ್ಷದಿಂದಾಗಿ ಉಂಟಾಗಿರುವ ಅನಿಲ ಅಭಾವದಿಂದ ರಾಜ್ಯದಲ್ಲಿ ಸೌದೆಗೆ ಬೇಡಿಕೆ ಹೆಚ್ಚಾಗಿದೆ. ಕಾಡು, ಕಾಡಿನಂಚಿನಲ್ಲಿ ಹಾಗೂ ಸರ್ಕಾರದ ಭೂಮಿಯಲ್ಲಿ ಮರಗಳ ಅಕ್ರಮ ಕಡಿತಲೆ ಆಗದಂತೆ ಕಟ್ಟೆಚ್ಚರ ವಹಿಸಲು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಸ್ಪಷ್ಟ ಸೂಚನೆ ನೀಡಿದ್ದಾರೆ. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಮತ್ತು ಅರಣ್ಯ ಪಡೆ ಮುಖ್ಯಸ್ಥರಿಗೆ ನೀಡಿರುವ ಲಿಖಿತ ಸೂಚನೆಯಲ್ಲಿ ಅವರು, ಸೌದೆಗಾಗಿ ಅಕ್ರಮ ಮರ ಕಡಿತಲೆ ಆಗದಂತೆ ಗಸ್ತು, ನಿಗಾ ಹೆಚ್ಚಿಸಲು ಆದೇಶಿಸಿದ್ದಾರೆ. ಅರಣ್ಯ ಇಲಾಖೆಯ ಎಲ್ಲ ವೃತ್ತದ, ಎಲ್ಲ ವಲಯಗಳಲ್ಲೂ ಸೂಕ್ತ ಗಸ್ತು ಮತ್ತು ಮುಂಜಾಗರೂಕತೆ ಕ್ರಮ ಕೈಗೊಳ್ಳಲು ನಿರ್ದೇಶನ ನೀಡಿದ್ದಾರೆ.

**<><*<><>*><>**

ರಾಜಕೀಯವಾಗಿ ಸೋಲು-ಗೆಲುವು ಕಂಡಿದ್ದರೂ ಜನಸೇವೆಯನ್ನು ಎಂದಿಗೂ ಮರೆಯುವುದಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಮೈಸೂರು ಸಮೀಪದ ವರುಣಾ ವಿಧಾನಸಭಾ ಕ್ಷೇತ್ರದ ಬೀರೇಶ್ವರಸ್ವಾಮಿ ದೇವಸ್ಥಾನದ ಪುನರ್ ಪ್ರತಿಷ್ಠಾಪನೆ ಸಮಾರಂಭದಲ್ಲಿ ಮಾತನಾಡಿದ ಅವರು, ೧೯೭೮ರಿಂದ ರಾಜಕೀಯ ಜೀವನ ಆರಂಭವಾಗಿದ್ದು, ಇಲ್ಲಿಯವರೆಗೆ ಅಪಾರ ಜನ ಬೆಂಬಲ ದೊರೆತಿದೆ ಎಂದು

ಹೇಳಿದ್ದಾರೆ. ಚಾಮುಂಡೇಶ್ವರಿ ಮತ್ತು ವರುಣಾ ಕ್ಷೇತ್ರದ ಜನರ ನಿರಂತರ ಬೆಂಬಲದಿಂದಾಗಿ ತಮಗೆ ಮುಖ್ಯಮಂತ್ರಿಯಾಗಿ ಹಾಗೂ ಹಣಕಾಸು ಸಚಿವನಾಗಿ ಕೆಲಸ ಮಾಡುವ ಅವಕಾಶ ಸಿಕ್ಕಿದೆ. ಈ ಅವಧಿಯಲ್ಲಿ ೧೭ ಬಾರಿ ರಾಜ್ಯ ಬಜೆಟ್ ಮಂಡಿಸಿರುವುದು ತಮ್ಮ ಜೀವನದ ಅತ್ಯಂತ ಹೆಮ್ಮೆಯ ಸಂಗತಿ ಎಂದು ತಿಳಿಸಿದ್ದಾರೆ.

<><*<><>*><>

ಬಾಗಲಕೋಟೆ ಹಾಗೂ ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರಗಳ ಅಭ್ಯರ್ಥಿಗಳ ಬಗ್ಗೆ ಬೆಂಗಳೂರಿನಲ್ಲಿ ಇಂದು ನಡೆದ ಕೇಂದ್ರೀಯ ಸಮಿತಿ ಸಭೆಯಲ್ಲಿ ಚರ್ಚಿಸಲಾಗಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ತಿಳಿಸಿದ್ದಾರೆ. ಸಭೆಯಲ್ಲಿ ಪಕ್ಷ ಸಂಘಟನೆ, ಪ್ರಸಕ್ತ ರಾಜಕೀಯ ವಿದ್ಯಾಮಾನಗಳು, ಮುಂಬರುವ ಉಪಚುನಾವಣೆಗಳಲ್ಲಿ ಪಕ್ಷದ ಗೆಲುವಿಗಾಗಿ ಕಾರ್ಯತಂತ್ರಗಳು ಸೇರಿದಂತೆ ಹಲವಾರು ಮಹತ್ವಪೂರ್ಣ ವಿಷಯಗಳ ಬಗ್ಗೆ ಚರ್ಚೆ ನಡೆಸಲಾಗಿದೆ ಎಂದು ಹೇಳಿದ್ದಾರೆ. ಉಪಚುನಾವಣೆ ಆಕಾಂಕ್ಷಿಗಳ ಕುರಿತು ಚರ್ಚೆಯಾಗಿದ್ದು, ಕೋರ್ ಕಮಿಟಿಯಲ್ಲಿ ಚರ್ಚಿಸಿದ ಹೆಸರುಗಳನ್ನು ಪಕ್ಷದ ವರಿಷ್ಠರಿಗೆ ಕಳುಹಿಸಿಕೊಡಲಾಗುವುದು ಎಂದು ತಿಳಿಸಿದ್ದಾರೆ. ಸಭೆಯಲ್ಲಿ ರಾಜ್ಯ ಉಸ್ತುವಾರಿ ಡಾ. ರಾಧಾಮೋಹನ್ ದಾಸ್ ಅಗರ್‌ವಾಲ್, ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಸೇರಿದಂತೆ ಹಲವು ಮುಖಂಡರು ಭಾಗವಹಿಸಿದ್ದರು.

<><*<><>*><>

ಪಶ್ಚಿಮ ಏಷ್ಯಾದಲ್ಲಿ ನಡೆಯುತ್ತಿರುವ ಸಂಘರ್ಷದಿಂದಾಗಿ ಸಿಲುಕಿರುವ ಅಂತಾರಾಷ್ಟ್ರೀಯ ಪ್ರವಾಸಿಗರ ಆತಿಥ್ಯ  ವಹಿಸಿಕೊಳ್ಳಲು ರಾಜ್ಯವು ಪೂರ್ವಭಾವಿ ಕ್ರಮಗಳನ್ನು ತೆಗೆದುಕೊಳ್ಳುತ್ತಿದೆ ಎಂದು ರಾಜ್ಯ ಪ್ರವಾಸೋದ್ಯಮ ಸಚಿವ ಎಚ್.ಕೆ.ಪಾಟೀಲ್  ತಿಳಿಸಿದ್ದಾರೆ.  ಬೆಂಗಳೂರಿನ  ಅರಮನೆ ಮೈದಾನದ ತ್ರಿಪುರ ವಾಸಿನಿಯಲ್ಲಿ ಆರಂಭವಾದ  ಮೂರು ದಿನಗಳ ಪ್ರಯಾಣ ಮತ್ತು ಪ್ರವಾಸೋದ್ಯಮ ಮೇಳದಲ್ಲಿ ಮುಖ್ಯ ಅತಿಥಿಯಾಗಿ ಮಾತನಾಡಿದ ಅವರು, ಸರ್ಕಾರ ರಾಜ್ಯದಲ್ಲಿ ಪ್ರವಾಸೋದ್ಯಮ ಮೂಲಸೌಕರ್ಯವನ್ನು ಬಲಪಡಿಸುತ್ತಿದೆ ಎಂದು ಸ್ಪಷ್ಟಪಡಿಸಿದ್ದಾರೆ.

<><*<><>*><>

ಖೇಲೋ ಇಂಡಿಯಾ ಯೋಜನೆಯಡಿ ಮಂಡ್ಯ ತಾಲ್ಲೂಕಿನ ವಿ.ಸಿ.ಫಾರಂನಲ್ಲಿ  ೧೪ ಕೋಟಿ ವೆಚ್ಚದ ಸುಸಜ್ಜಿತ ಬಹುಪಯೋಗಿ ನೂತನ ಕ್ರೀಡಾಂಗಣ ಕಾಮಗಾರಿಗೆ ನಾಳೆ ಕೇಂದ್ರದ ಯುವಜನ ಸೇವೆ ಹಾಗೂ ಕ್ರೀಡಾ ಸಚಿವ ಮನ್ಸುಖ್ ಮಾಂಡವೀಯ ಚಾಲನೆ ನೀಡಲಿದ್ದಾರೆ. ಬಳಿಕ ಅವರು, ಧಾರವಾಡದಲ್ಲಿ ನೂತನವಾಗಿ ನಿರ್ಮಾಣವಾಗಿರುವ ಕ್ರೀಡಾಸಂಕೀರ್ಣ ಮತ್ತು ಅಂತಾರಾಷ್ಟ್ರೀಯ ಮಟ್ಟದ ಈಜುಕೊಳವನ್ನು ಲೋಕಾರ್ಪಣೆಗೊಳಿಸಲಿದ್ದಾರೆ. ೫೦ ಕೋಟಿ ಅನುದಾನದಡಿ ಈ ಕ್ರೀಡಾಸಂಕೀರ್ಣ ಮತ್ತು ಈಜುಕೊಳವನ್ನು ನಿರ್ಮಿಸಲಾಗಿದೆ.

<><*<><>*><>

ಪೊಲೀಸ್ ಠಾಣೆಯಲ್ಲಿ ಮಹಿಳೆಯುರು ದೂರು ದಾಖಲಿಸಲು ಅಥವಾ ಯಾವುದೇ ರೀತಿಯ ಮಾಹಿತಿ ಪಡೆಯಲು ಬಂದಾಗ ಅವರೊಂದಿಗೆ ಗೌರವಯುತವಾಗಿ ವರ್ತಿಸಿ ಎಂದು ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ನಾಗಲಕ್ಷ್ಮಿ ಚೌದರಿ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಮೈಸೂರಿನಲ್ಲಿಂದು ಜನ ಸುನ್ವಾಯಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಮಹಿಳೆಯರಿಗೆ ಯಾವುದೇ ರೀತಿಯ ತೊಂದರೆ ಉಂಟಾದರು ನಿರ್ಭಯವಾಗಿ ಪೊಲೀಸ್ ಠಾಣೆಗೆ ಆಗಮಿಸಿ ದೂರು ಸಲ್ಲಿಸುವಂತಾಗಬೇಕು ಎಂದು ಅಭಿಪ್ರಾಯಪಟ್ಟಿದ್ದಾರೆ.

<><*<><>*><>

## ಸಂಕ್ಷಿಪ್ತ ಸುದ್ದಿಗಳು

೧. ನಾಳೆ ದಾವಣಗೆರೆ ಜಿಲ್ಲೆಯ ೨೨ಕ್ಕೂ ಹೆಚ್ಚು ನ್ಯಾಯಾಲಯಗಳಲ್ಲಿ ನಡೆಯಲಿರುವ ರಾಷ್ಟ್ರೀಯ ಲೋಕ್ ಅದಾಲತ್‌ನಲ್ಲಿ ೧೦ ಸಾವಿರಕ್ಕೂ ಅಧಿಕ ಪ್ರಕರಣಗಳ ರಾಜೀ ಸಂಧಾನದ ಮೂಲಕ ಬಗೆಹರಿಸುವ ಗುರಿ ಹೊಂದಲಾಗಿದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಡಿ.ಕೆ.ವೇಲಾ ಹೇಳಿದ್ದಾರೆ.

೨. ಹಲವು ವರ್ಷಗಳಿಂದ ಬಾಕಿ ಇರುವ ಏಳೂವರೆ ಸಾವಿರ ದರಕಾಸ್ತುಗಳಿಗೆ ಆರ್‌ಟಿಸಿ ಮಾಡಿಸಿ ಮುಖ್ಯಮಂತ್ರಿ ಅವರಿಂದ ರೈತರಿಗೆ ವಿತರಣೆ ಮಾಡಲಾಗುತ್ತದೆ. ಇದರಿಂದ ಬಹಳ ವರ್ಷಗಳ ರೈತರ ಬೇಡಿಕೆ ಈಡೇರಲಿದೆ ಎಂದು ಕೋಲಾರ ಜಿಲ್ಲಾಧಿಕಾರಿ ಡಾ. ಎಂ.ಆರ್. ರವಿ ತಿಳಿಸಿದ್ದಾರೆ.

೩. ರಾಮನಗರ ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯತ್‌ಗಳಲ್ಲಿ ಮಹಿಳಾ ಸ್ನೇಹಿ ಶೌಚಾಲಯ ಹಾಗೂ ವಿಶ್ರಾಂತಿ ಕೊಠಡಿಗಳ ವ್ಯವಸ್ಥೆ ಮಾಡಲು ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಅನ್ಮೋಲ್ ಜೈನ್ ತಿಳಿಸಿದ್ದಾರೆ.

೪. ೨೦೨೫-೨೬ನೇ ಸಾಲಿನ ಎಸ್.ಎಸ್.ಎಲ್.ಸಿ ಪರೀಕ್ಷೆ-೧ ಇದೇ ೧೮ರಿಂದ ಪ್ರಾರಂಭವಾಗಲಿದೆ. ಈ ಪರೀಕ್ಷೆಗಳು ಸುಸೂತ್ರವಾಗಿ ನಡೆಯಲು ಎಲ್ಲಾ ರೀತಿಯ ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ ಎಂದು ಬೆಂಗಳೂರು ದಕ್ಷಿಣ ಜಿಲ್ಲೆಯ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

೫. ಯಾದಗಿರಿ ಜಿಲ್ಲೆಯಲ್ಲಿ ಬೇಸಿಗೆ ಹಿನ್ನೆಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಉಂಟಾಗದಂತೆ ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ ಎಂದು ಯಾದಗಿರಿ ಜಿಲ್ಲಾಧಿಕಾರಿ ಹರ್ಷಲ್ ಭೋಯರ್ ತಿಳಿಸಿದ್ದಾರೆ.

೬. ಮಹಾತ್ಮ ಗಾಂಧಿ ನರೇಗಾ ಯೋಜನೆಯಡಿ ಪ್ರಗತಿ ಹಂತದಲ್ಲಿರುವ ಎಲ್ಲ ಕಾಮಗಾರಿಗಳನ್ನು ಆದ್ಯತೆಯ ಮೇರೆಗೆ ಕೂಡಲೇ ಪೂರ್ಣಗೊಳಿಸಬೇಕು ಎಂದು ವಿಜಯಪುರ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಪ್ರಕಾಶ್ ವಡ್ಡರ ತಿಳಿಸಿದ್ದಾರೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ <>*><>**